- ಉಪ್ಪಾರ ಸಮುದಾಯವು ತೊಡಗಿಕೊಂಡಿರುವ ಸಾಂಪ್ರದಾಯಿಕ ವೃತ್ತಿಯಲ್ಲಿ ಕೌಶಲ್ಯಾಭಿವೃದ್ಧಿ ಹೊಂದಲು ಹಾಗೂ ಇತರೆ ವೃತ್ತಿ ಮತ್ತು ಉದ್ಯೋಗ ಕೈಗೊಳ್ಳಲು ಆರ್ಥಿಕ ಸಹಾಯ ಒದಗಿಸಲಾಗುವುದು.

- ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಾನದ ವತಿಯಿಂದ ರಾಯಣ್ಣ ಹುತಾತ್ಮರಾದ ಆಲದ ಮರದ ಸ್ಥಳ ಹಾಗೂ ಸಮಾಧಿ ಸ್ಥಳವನ್ನು ಅಭಿವೃದ್ಧಿಪಡಿಸಿ ಪ್ರವಾಸಿ ತಾಣವನ್ನಾಗಿ ಮಾರ್ಪಡಿಸಲು ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಆರ್ಥಿಕ ನೆರವು.

203) 2014–15ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಗೆ ಒಟ್ಟಾರೆ 1445 ಕೋಟಿ ರೂ. ಒದಗಿಸಲಾಗಿದೆ.

## ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್

**"ಅಲ್ಪಸಂಖ್ಯಾತರನ್ನು ಹೇಗೆ ನಡೆಸಿಕೊಳ್ಳುತ್ತಿದೆ ಎಂಬುದರ ಮೇಲೆ ಆ ಸಮಾಜದ ನಾಗರಿಕತೆಯನ್ನು ಅಳೆಯಬಹುದು"**

**– ಮಹಾತ್ಮಾ ಗಾಂಧಿ**

204) ನಮ್ಮ ಸರ್ಕಾರವು ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಜನಾಂಗವನ್ನು ಸಶಕ್ತಗೊಳಿಸಲು ಮತ್ತು ಅಭಿವೃದ್ಧಿಗೊಳಿಸಲು ಸಮಾನ ಅವಕಾಶಗಳನ್ನು ಕಲ್ಪಿಸುತ್ತಿದೆ. ಈ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಬದ್ಧವಾಗಿದ್ದು, ಇದಕ್ಕಾಗಿ 110 ಕೋಟಿ ರೂ.ಗಳನ್ನು ಒದಗಿಸಲಾಗಿದೆ.



205) 23 ಜಿಲ್ಲೆಗಳಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಕಛೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ 7 ಜಿಲ್ಲೆಗಳಲ್ಲಿ ಜಿಲ್ಲಾ ಕಛೇರಿಗಳನ್ನು ಪ್ರಾರಂಭಿಸಲಾಗುವುದು.

206) ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ಭೋಜನ ವೆಚ್ಚವನ್ನು 1000 ರೂ.ಗಳಿಂದ 1100 ರೂ.ಗಳಿಗೆ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ 900 ರೂ.ಗಳಿಂದ 1000 ರೂ.ಗಳಿಗೆ ಹೆಚ್ಚಿಸಲಾಗುವುದು.

207) ಅಲ್ಪಸಂಖ್ಯಾತರ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ಭೋಜನ ವೆಚ್ಚವನ್ನು 600 ರೂ.ಗಳಿಂದ 750 ರೂ.ಗಳಿಗೆ ಹೆಚ್ಚಿಸಲಾಗುವುದು ಹಾಗೂ ಪ್ರವೇಶ ಪಡೆಯಲು ಇರುವ ಕುಟುಂಬದ ವಾರ್ಷಿಕ ವರಮಾನ ಮಿತಿಯನ್ನು 15 ಸಾವಿರ ರೂ.ಗಳಿಂದ 1 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

208) ಅಲ್ಪಸಂಖ್ಯಾತರ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ಅನಾಥ / ನಿರ್ಗತಿಕ ಮಕ್ಕಳ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆ 350 ರೂ.ಗಳಿಂದ 500 ರೂ.ಗಳಿಗೆ ಹೆಚ್ಚಿಸಲಾಗುವುದು. ವಾರ್ಷಿಕ ಕುಟುಂಬ ಆದಾಯದ ಮಿತಿಯನ್ನು 11 ಸಾವಿರ ರೂ.ಗಳಿಂದ 30 ಸಾವಿರ ರೂ.ಗಳಿಗೆ ಹೆಚ್ಚಿಸಲಾಗುವುದು.

209) ಅಲ್ಪಸಂಖ್ಯಾತರ 100 ಶಾಲೆಗಳಿಗೆ ಇ–ಲರ್ನಿಂಗ್ ಕಲಿಕೆ ಮತ್ತು ಬೋಧನಾ ಸಾಮಗ್ರಿ, ಗಣಕಯಂತ್ರಗಳನ್ನು ನೀಡಲು ಉದ್ದೇಶಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 1.5 ಕೋಟಿ ರೂ.ಗಳನ್ನು ಒದಗಿಸಲಾಗುವುದು.

210) ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ತರಬೇತಿ ಕೇಂದ್ರಗಳಲ್ಲಿ IAS / KAS ಪರೀಕ್ಷೆಗಳಿಗೆ ತರಬೇತಿ